# 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 35

# ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಸಾರ್ವಜನಿಕ ವಲಯದ ಸಂಸ್ಥೆಗಳ ನೌಕರರ ಸೇವೆಗಳನ್ನು ಸಾರ್ವಜನಿಕ ಸೇವೆಗೆ ವಿಲೀನಗೊಳಿಸುವುದಕ್ಕೆ ನಿಷೇಧ) ಅಧಿನಿಯಮ, 2020

## ಪ್ರಕರಣಗಳ ಪಟ್ಟಿ

**ಪ್ರಕರಣಗಳು:**


1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು
3. ರಾಜ್ಯ ಸಿವಿಲ್ ಸೇವೆಯಲ್ಲಿ ವಿಲೀನಗೊಳಿಸುವಿಕೆಗೆ ನಿಷೇಧ
4. ಅಧಿನಿಯಮವು ಇತರ ಕಾನೂನುಗಳಿಗೆ ಅಧ್ಯಾರೋಹಿಯಾಗಿರುವುದು
5. ತೊಂದರೆಗಳ ನಿವಾರಣೆಗೆ ಅಧಿಕಾರ


## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**ಅಧಿನಿಯಮ ಸಂಖ್ಯೆ 2020ರ 35.-** ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ 28000/2003ರಲ್ಲಿ ಮತ್ತು ಸಂಬಂಧಿತ ಪ್ರಕರಣಗಳಲ್ಲಿ, ಸರ್ಕಾರಿ ಇಲಾಖೆಗಳಲ್ಲಿ ನಿಯೋಜನೆಯ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಾರ್ವಜನಿಕ ವಲಯ ಉದ್ಯಮಗಳ ನೌಕರರರನ್ನು ವಿಲೀನಗೊಳಿಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶನವನ್ನು ನೀಡಿದೆ.

ಮೇಲಿನ ಸನ್ನಿವೇಶಗಳ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರವು ಸಾರ್ವಜನಿಕ ವಲಯ ಉದ್ಯಮಗಳ ನೌಕರರನ್ನು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು ಮತ್ತು ಪೌರ ನಿಗಮಗಳಿಗೆ ವಿಲೀನಗೊಳಿಸುವ ಅನಿವಾರ್ಯತೆಯನ್ನು ಎದುರಿಸುತ್ತಿತ್ತು.

ಸಾರ್ವಜನಿಕ ವಲಯದ ಸಂಸ್ಥೆಗಳು ವಿವಿಧ ಕಾರಣಗಳಿಂದಾಗಿ ಮುಚ್ಚಲ್ಪಡುತ್ತಿದ್ದು ಮತ್ತು ಸಾರ್ವಜನಿಕ ವಲಯದ ಅಂಥ ಸಂಸ್ಥೆಗಳಲ್ಲಿನ ನೌಕರರು ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ತಮ್ಮ ಸೇವೆಗಳನ್ನು ವಿಲೀನಗೊಳಿಸಬೇಕೆಂದು ಒತ್ತಾಯಮಾಡುತ್ತ ತಮ್ಮ ಸೇವೆಗಳನ್ನು ವಿಲೀನಪಡಿಸಬೇಕೆಂದು ಕೋರಿ ನ್ಯಾಯಾಲಯಗಳಿಗೆ ಮೊರೆ ಹೋಗುತ್ತಿದ್ದಾರೆ.

ಸರ್ಕಾರಿ ನೌಕರರಿಗೆ ಅನ್ವಯವಾಗುವ ನೇಮಕಾತಿ ಮತ್ತು ಸೇವಾ ಷರತ್ತುಗಳು ಮತ್ತು ವೇತನ ಶ್ರೇಣಿಗಳನ್ನು ನಿಯಂತ್ರಿಸುವ ನಿಯಮಗಳು ಸಾರ್ವಜನಿಕ ವಲಯದ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವ ನಿಯಮಗಳಿಗಿಂತ ಭಿನ್ನವಾಗಿರುತ್ತದೆ ಮತ್ತು ಅನೇಕ ಸಲ ಹೊಂದಿಕೆಯಾಗುವುದಿಲ್ಲ. ಸಾರ್ವಜನಿಕ ವಲಯದಲ್ಲಿನ ಸಂಸ್ಥೆಗಳ ನೌಕರರ ಅಂಥ ವಿಲೀನಗೊಳಿಸುವಿಕೆಯು ರಾಜ್ಯದ ಅಭಿವೃದ್ಧಿ ಕಾರ್ಯಕ್ರಮಗಳಿಗೆ ತೀವ್ರ ಪರಿಣಾಮವನ್ನುಂಟು ಮಾಡಿ ರಾಜ್ಯದ ಹಣಕಾಸು ಅಪರಿಮಿತವಾಗಿ ಬರಿದಾಗುವಂತೆ ಮಾಡುತ್ತಿದೆ ಮತ್ತು ಇದು ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿದೆ.

ರಾಜ್ಯ ಸಿವಿಲ್ ಸೇವೆಗಳಿಗೆ ಸಾರ್ವಜನಿಕ ವಲಯ ಉದ್ಯಮಗಳ ನೌಕರರ ವಿಲೀನವನ್ನು ತಡೆಯುವುದಕ್ಕಾಗಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಸಾರ್ವಜನಿಕ ವಲಯದ ಸಂಸ್ಥೆಗಳ ನೌಕರರ ಸೇವೆಗಳನ್ನು ವಿಲೀನಗೊಳಿಸುವುದಕ್ಕೆ ನಿಷೇಧ) ವಿಧೇಯಕ, 2020ನ್ನು ಅಧಿನಿಯಮಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

[2020ರ ವಿಧಾನಸಭೆಯ ವಿಧೇಯಕ ಸಂಖ್ಯೆ: 32, ಕಡತ ಸಂಖ್ಯೆ: ಸಂವ್ಯಶಾಇ 33 ಶಾಸನ 2020]

[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 41ನೇಯ ನಮೂದನೆಯಡಿಯಲ್ಲಿ ಬರುತ್ತದೆ]

[ಕರ್ನಾಟಕ ರಾಜ್ಯ ಪತ್ರದ ಭಾಗ-IVA, ವಿಶೇಷ ಪತ್ರಿಕೆ ಸಂಖ್ಯೆ: 470 ದಿನಾಂಕ: 19.10.2020ರಲ್ಲಿ

ಪ್ರಕಟಣೆಗೊಂಡಿದೆ]

## 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 35

(2020ರ ಅಕ್ಟೋಬರ್ ತಿಂಗಳ 19ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

# ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಸಾರ್ವಜನಿಕ ವಲಯದ ಸಂಸ್ಥೆಗಳ ನೌಕರರ ಸೇವೆಗಳನ್ನು ಸಾರ್ವಜನಿಕ ಸೇವೆಗೆ ವಿಲೀನಗೊಳಿಸುವುದಕ್ಕೆ ನಿಷೇಧ) ಅಧಿನಿಯಮ, 2020

(2019ರ ಅಕ್ಟೋಬರ್‌ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಸಾರ್ವಜನಿಕ ವಲಯದ ಸಂಸ್ಥೆಗಳ ನೌಕರರ ಸೇವೆಗಳನ್ನು ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಅಥವಾ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ವಿಲೀನಗೊಳಿಸುವುದನ್ನು ನಿಷೇಧಿಸುವುದಕ್ಕಾಗಿ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ ;

ಸಾರ್ವಜನಿಕ ವಲಯದ ಸಂಸ್ಥೆಗಳು ವಿವಿಧ ಕಾರಣಗಳಿಂದಾಗಿ ಮುಚ್ಚಲ್ಪಡುತ್ತಿದ್ದು ಮತ್ತು ಸಾರ್ವಜನಿಕ ವಲಯದ ಅಂಥ ಸಂಸ್ಥೆಗಳಲ್ಲಿನ ನೌಕರರು ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ತಮ್ಮ ಸೇವೆಗಳನ್ನು ವಿಲೀನಗೊಳಿಸಬೇಕೆಂದು ಒತ್ತಾಯಮಾಡುತ್ತಿರುವುದರಿಂದ ಮತ್ತು ತಮ್ಮ ಸೇವೆಗಳನ್ನು ವಿಲೀನಪಡಿಸಬೇಕೆಂದು ಕೋರಿ ನ್ಯಾಯಾಲಯಗಳಿಗೆ ಮೊರೆ ಹೋಗುತ್ತಿರುವುದರಿಂದ ;

ಸರ್ಕಾರಿ ನೌಕರರಿಗೆ ಅನ್ವಯವಾಗುವ ನೇಮಕಾತಿ ಮತ್ತು ಸೇವಾ ಷರತ್ತುಗಳು ಮತ್ತು ವೇತನ ಶ್ರೇಣಿಗಳನ್ನು ನಿಯಂತ್ರಿಸುವ ನಿಯಮಗಳು ಸಾರ್ವಜನಿಕ ವಲಯದ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವ ನಿಯಮಗಳಿಗಿಂತ ಭಿನ್ನವಾಗಿರುತ್ತದೆ ಮತ್ತು ಅನೇಕ ಸಲ ಹೊಂದಿಕೆಯಾಗುವುದಿಲ್ಲ. ಸಾರ್ವಜನಿಕ ವಲಯದಲ್ಲಿನ ಸಂಸ್ಥೆಗಳ ನೌಕರರ ಅಂಥ ವಿಲೀನಗೊಳಿಸುವಿಕೆಯು ರಾಜ್ಯದ ಅಭಿವೃದ್ಧಿ ಕಾರ್ಯಕ್ರಮಗಳಿಗೆ ತೀವ್ರ ಪರಿಣಾಮವನ್ನುಂಟು ಮಾಡಿ ರಾಜ್ಯದ ಹಣಕಾಸು ಅಪರಿಮಿತವಾಗಿ ಬರಿದಾಗುವಂತೆ ಮಾಡುತ್ತಿರುವುದರಿಂದ ಮತ್ತು ಇದು ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿರುವುದರಿಂದ ;

ಮತ್ತು ಸಾರ್ವಜನಿಕ ವಲಯದ ಅಂಥ ಸಂಸ್ಥೆಗಳ ನೌಕರರ ಸೇವೆಗಳನ್ನು ರಾಜ್ಯದ ಸಿವಿಲ್ ಸೇವೆಗಳಲ್ಲಿ ವಿಲೀನಗೊಳಿಸುವುದನ್ನು ನಿಷೇಧಿಸುವುದಕ್ಕಾಗಿ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1 ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಸಾರ್ವಜನಿಕ ವಲಯದ ಸಂಸ್ಥೆಗಳ ನೌಕರರ ಸೇವೆಗಳನ್ನು ಸಾರ್ವಜನಿಕ ಸೇವೆಗೆ ವಿಲೀನಗೊಳಿಸುವುದಕ್ಕೆ ನಿಷೇಧ) ಅಧಿನಿಯಮ, 2020 ಎಂದು ಕರೆಯತಕ್ಕದ್ದು.

(2) ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ [1][ದಿನಾಂಕ][1]ದಿಂದ ಇದು ಜಾರಿಗೆ ಬರತಕ್ಕದ್ದು.

1. ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ: ಡಿಪಿಎಆರ್ 34 ಎಸ್‌ಆರ್‌ಡಿ 2021, ದಿನಾಂಕ: 15.03.2021ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

**2. ಪರಿಭಾಷೆಗಳು.-** (1) ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,

(ಎ) ``ಸಾರ್ವಜನಿಕ ವಲಯದ ಸಂಸ್ಥೆ'' ಎಂದರೆ,-

(i) ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ, 1959ರ ಅಡಿಯಲ್ಲಿ ನೋಂದಣಿಯಾದ ಸಹಕಾರ ಸಂಘ ಅಥವಾ ಸಹಕಾರ ಸಂಘಗಳ ನೋಂದಣಿಗೆ ಸಂಬಂಧಿಸಿದ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ

ಕಾನೂನಿನ ಅಡಿಯಲ್ಲಿ ನೋಂದಣಿಯಾದ, ಮತ್ತು ತನ್ನ ನಿರ್ವಹಣೆಗಾಗಿ ಪೂರ್ಣವಾಗಿಯಾಗಲೀ ಅಥವಾ ಭಾಗಶಃವಾಗಿಯಾಗಲೀ ರಾಜ್ಯ ಸರ್ಕಾರದಿಂದ ನಿಧಿಯನ್ನು ಪಡೆಯುತ್ತಿರುವ, ನೋಂದಣಿಯಾಗಿರಲಿ ಅಥವಾ ಇಲ್ಲದಿರಲಿ, ರಾಜ್ಯ ಸರ್ಕಾರದಿಂದ ನೆರವು ಪಡೆಯುತ್ತಿರುವ ಸಂಘ ;

(ii) ಕಂಪನಿಗಳ ಅಧಿನಿಯಮ, 2013ರ (2013ರ ಅಧಿನಿಯಮ ಸಂ.18) ಅರ್ಥವ್ಯಾಪ್ತಿಯೊಳಗಿನ ಒಂದು ಸರ್ಕಾರಿ ಕಂಪನಿ ;

(iii) ಸ್ಥಳೀಯ ಪ್ರಾಧಿಕಾರ ಎಂದರೆ ಕಾನೂನಿಗನುಸಾರವಾಗಿ ಸರ್ಕಾರದ ಮೂಲಕ ಸ್ಥಾಪನೆಯಾದ ಸ್ಥಳೀಯ ಸ್ವಯಮಾಡಳಿತ ಸಂಸ್ಥೆ ;

(iv) ರಾಜ್ಯ ಸರ್ಕಾರದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ರಾಜ್ಯ ಅಥವಾ ಕೇಂದ್ರ ಅಧಿನಿಯಮದ ಮೂಲಕ ಅಥವಾ ಅದರಡಿಯಲ್ಲಿ ಸ್ಥಾಪನೆಯಾದ ಶಾಸನಬದ್ಧವಾದ ಅಥವಾ ಶಾಸನಬದ್ಧವಲ್ಲದ ನಿಕಾಯ ಅಥವಾ ನಿಗಮ;

(v) ರಾಜ್ಯ ವಿಧಾನಮಂಡಲದ ಯಾವುದೇ ಕಾನೂನಿನ ಮೂಲಕ ಅಥವಾ ಅದರಡಿಯಲ್ಲಿ ಸ್ಥಾಪನೆಯಾದ ಅಥವಾ ಸ್ಥಾಪನೆಯಾಗಿದೆಯೆಂದು ಭಾವಿಸಲಾಗುವ ಸರ್ಕಾರಿ ವಿಶ್ವವಿದ್ಯಾಲಯ ; ಮತ್ತು

(vi) ಸರ್ಕಾರವು ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದ ಯಾವುದೇ ಇತರ ಸಂಸ್ಥೆ ಅಥವಾ ಘಟಕ.

(ಬಿ) ``ಸರ್ಕಾರ" ಎಂದರೆ ಕರ್ನಾಟಕ ಸರ್ಕಾರ;

(ಸಿ) ``ಸಾರ್ವಜನಿಕ ಸೇವೆ" ಎಂದರೆ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978ರ (1990ರ ಕರ್ನಾಟಕ ಅಧಿನಿಯಮ 14) 2ನೇ ಪ್ರಕರಣದ (3)ನೇ ಖಂಡದಲ್ಲಿ ಪರಿಭಾಷಿಸಿದಂತೆ ರಾಜ್ಯದ ಒಂದು ಸಾರ್ವಜನಿಕ ಸೇವೆ.

(2) ಇಲ್ಲಿ ಬಳಸಲಾದ ಮತ್ತು ಪರಿಭಾಷಿಸಿರದ ಇತರ ಪದಗಳು ಮತ್ತು ಪದಾವಳಿಗಳು ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978ರಲ್ಲಿ (1990ರ ಕರ್ನಾಟಕ ಅಧಿನಿಯಮ 14) ಅಥವಾ ಅದರ ಅಡಿಯಲ್ಲಿ ಮಾಡಲಾದ ಅಥವಾ ಮಾಡಲಾಗಿದೆಯೆಂದು ಭಾವಿಸಲಾಗುವ ನಿಯಮಗಳಲ್ಲಿ ಅವುಗಳಿಗೆ ನೀಡಲಾದ ಅದೇ ಅರ್ಥವನ್ನು ಹೊಂದಿರತಕ್ಕದ್ದು.

**3. ರಾಜ್ಯ ಸಿವಿಲ್ ಸೇವೆಯಲ್ಲಿ ವಿಲೀನಗೊಳಿಸುವಿಕೆಗೆ ನಿಷೇಧ.-** (1) ಯಾವುದೇ ನ್ಯಾಯಾಲಯ, ನ್ಯಾಯಾಧಿಕರಣ ಅಥವಾ ಯಾವುದೇ ಇತರ ಪ್ರಾಧಿಕಾರದ ಯಾವುದೇ ಕಾನೂನು ಕರಾರು ಅಥವಾ ಒಪ್ಪಂದ ಅಥವಾ ಯಾವುದೇ ತೀರ್ಪು, ಡಿಕ್ರಿ ಅಥವಾ ಆದೇಶದಲ್ಲಿ ಅಥವಾ ಸರ್ಕಾರದ ಅಥವಾ ಸರ್ಕಾರದ ಯಾವೊಬ್ಬ ಇತರ ಅಧಿಕಾರಿಯ ಯಾವುದೇ ಆದೇಶದಲ್ಲಿ ಅಥವಾ ವ್ಯವಹರಣೆಗಳಲ್ಲಿ ಏನೇ ಒಳಗೊಂಡಿದ್ದರೂ, ಸಾರ್ವಜನಿಕ ವಲಯದ ಸಂಸ್ಥೆಯಲ್ಲಿನ ಯಾವೊಬ್ಬ ನೌಕರನು, ಸಾರ್ವಜನಿಕ ವಲಯದಲ್ಲಿನ ಅಂಥ ಸಂಸ್ಥೆಯನ್ನು ಮುಚ್ಚಲಾಗಿದೆ ಅಥವಾ ಮುಚ್ಚುವ ಸಂಭವವಿದೆ ಅಥವಾ ನೌಕರನು ನಿಯೋಜನೆಯ ಮೇರೆಗೆ ಅಥವಾ ಕರಾರಿನ ಮೇರೆಗೆ ಅಥವಾ ಕಚೇರಿ ಕರ್ತವ್ಯದ ಮೇರೆಗೆ ಯಾವುದೇ ಇಲಾಖೆಯಲ್ಲಿ ಕಾರ್ಯನಿರ್ವಹಿಸಿದ್ದಾನೆ ಅಥವಾ ಕಾರ್ಯನಿರ್ವಹಿಸುತ್ತಿದ್ದಾನೆ ಎಂಬುದನ್ನು ಒಳಗೊಂಡಂತೆ ಇತರ ಯಾವುದೇ ಆಧಾರದ ಮೇರೆಗೆ ಈ ಅಧಿನಿಯಮದ ಪ್ರಾರಂಭದ ದಿನಾಂಕದಿಂದ ಸಿವಿಲ್ ಸೇವೆಯಲ್ಲಿ ವಿಲೀನಗೊಳ್ಳುವುದಕ್ಕೆ ಅರ್ಹನಾಗತಕ್ಕದ್ದಲ್ಲ ಮತ್ತು ಅದಕ್ಕನುಸಾರವಾಗಿ,-

(i) ಸರ್ಕಾರ ಅಥವಾ ಯಾವುದೇ ವ್ಯಕ್ತಿ ಅಥವಾ ಯಾವುದಾದರೂ ಇತರ ಪ್ರಾಧಿಕಾರದ ವಿರುದ್ಧ ಯಾವುದೇ ನ್ಯಾಯಾಲಯ, ನ್ಯಾಯಾಧಿಕರಣ ಅಥವಾ ಇತರ ಪ್ರಾಧಿಕಾರದಲ್ಲಿ ಸಾರ್ವಜನಿಕ ಸೇವೆಯಲ್ಲಿ ಅಂಥ ವಿಲೀನಗೊಳಿಸುವಿಕೆಗಾಗಿ ಯಾವುದೇ ದಾವೆ ಅಥವಾ ಇತರ ವ್ಯವಹರಣೆಯನ್ನು ಹೂಡತಕ್ಕದ್ದಲ್ಲ, ನಿರ್ವಹಿಸತಕ್ಕದ್ದಲ್ಲ ಅಥವಾ ಮುಂದುವರಿಸತಕ್ಕದ್ದಲ್ಲ; ಮತ್ತು

(ii) ಸಾರ್ವಜನಿಕ ಸೇವೆಯಲ್ಲಿ ಅಂಥ ವಿಲೀನಗೊಳಿಸುವಿಕೆಯನ್ನು ನಿರ್ದೇಶಿಸುವ ಯಾವುದೇ ಡಿಕ್ರಿ ಅಥವಾ ಆದೇಶವನ್ನು ಯಾವುದೇ ನ್ಯಾಯಾಲಯವು ಜಾರಿಗೊಳಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಸಾರ್ವಜನಿಕ ವಲಯದ ಸಂಸ್ಥೆಯ ಯಾವೊಬ್ಬ ನೌಕರನನ್ನು, ಸಂಬಂಧಪಟ್ಟ ಕಾನೂನಿನ ಅಡಿಯಲ್ಲಿ ಲಭ್ಯವಾಗುವ ಪುನರ್ವಸತಿಯ ಯಾವುದೇ ಸ್ಕೀಮಿನ ಪ್ರಯೋಜನಗಳಿಗೆ ಅನರ್ಹಗೊಳಿಸತಕ್ಕದ್ದಲ್ಲ.

**4. ಅಧಿನಿಯಮವು ಇತರ ಕಾನೂನುಗಳಿಗೆ ಅಧ್ಯಾರೋಹಿಯಾಗಿರುವುದು.-** ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಇದಕ್ಕೆ ಅಸಂಗತವಾಗಿರುವುದು ಏನೇ ಒಳಗೊಂಡಿದ್ದರೂ ಈ ಅಧಿನಿಯಮದ ಉಪಬಂಧಗಳು ಪರಿಣಾಮಕಾರಿಯಾಗಿರತಕ್ಕದ್ದು.

**5. ತೊಂದರೆಗಳ ನಿವಾರಣೆಗೆ ಅಧಿಕಾರ.-** ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಿಸಲಾದ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬಂದಲ್ಲಿ ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಅಂಥ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಮೂರು ವರ್ಷಗಳ ಅವಧಿಯು ಮುಕ್ತಾಯವಾದ ತರುವಾಯ ಅಂಥ ಯಾವುದೇ ಆದೇಶವನ್ನು ಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ. ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

**GOVERNMENT OF KARNTAKA**

No. DPAR 34 SRD 2021

Karnataka Government Secretariat,
Vidhana Soudha,
Bengaluru, date: 17.03.2021.

**NOTIFICATION**

In exercise of the powers conferred by sub-section (2) of section 1 of the Karnataka State Civil Services (Prohibition of Absorption of the Services of the Employees of Establishments in Public Sector into Public Service) Act, 2020 (Karnataka Act No. 35 of 2020) the Government of Karnataka hereby appoints the 15th day of March 2021, as the date on which all the provisions of the said Act, shall come into force.

By Order and in the name of
the Governor of Karnataka

(CHANDRAHAS G TALUKAR)
Deputy Secretary to Government
Department of Personnel and
Administrative Reforms
(Service Rules-2)